**SC No.30/2025**
**PW-5**
**CW-5**

ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ: 57)
ನಮೂನೆ ಸಂಖ್ಯೆ: 4

## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರ ನ್ಯಾಯಾಲಯದಲ್ಲಿ, ಬೆಳಗಾವಿ.

## ಎಸ್.ಸಿ ನಂ: 30/2025

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಇಮ್ರಾನ್ ಪಠಾನ್ | ಪ್ರಾಸಾ: 5 |
| ತಂದೆಯ ಹೆಸರು | : | ಇಕ್ಬಾಲ್ ಪಠಾನ್ | ಚಾಸಾ: 5 |
| ವಯಸ್ಸು | : | 46 ವರ್ಷ | ದಿನಾಂಕ 09.06.2026 ರಂದು ಸಾಕ್ಷಿದಾರರಿಗೆ ಸತ್ಯಪ್ರತಿಜ್ಞೆಯನ್ನು ಬೋಧಿಸಲಾಯಿತು. |
| ಉದ್ಯೋಗ | : | ವ್ಯಾಪಾರ | |
| ವಾಸಸ್ಥಳ | : | ಶಹಪೂರ, ಬೆಳಗಾವಿ | |

**ಮುಖ್ಯವಿಚಾರಣೆ: ಮಾನ್ಯ ಸರ್ಕಾರಿ ಅಭಿಯೋಜಕರಿಂದ:**

ನನಗೆ ಚಾಸಾ 1, 4,6 ರಿಂದ 11 ಇವರ ಪರಿಚಯ ಇರುವುದಿಲ್ಲ. ನನಗೆ ಆರೋಪಿತರ ಪರಿಚಯ ಇರುವುದಿಲ್ಲ. ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಆಗಿರುವ ಘಟನೆಯನ್ನು ನಾನು ನೋಡಿಲ್ಲ. ಈ ಬಗ್ಗೆ ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಅಭಿಯೋಜನೆಯ ಪರ ಕೇಸಿಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿಯುವುದು ಕಂಡುಬರುತ್ತದೆ, ಈ ಕಾರಣದಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ.)

**SC No.30/2025**
**PW-5**
**CW-5**

ಪಾಟೀ ಸವಾಲುಃ  ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ

2. ದಿನಾಂಕ 23.05.2024 ರಂದು ಸಂಜೆ 06.00 ಗಂಟೆಗೆ ಶಹಪೂರದ ಅಲೂನಳ್ಳಿ ಹಜರತ ಬಾಬಾ ದರ್ಗಾದ ಹತ್ತಿರ ಚಾಸಾ 1, 4, 10 ಮತ್ತು 11 ರವರಿದ್ದಾಗ ಆರೋಪಿತರು ಒಂದು ಅಕ್ರಮಕೂಟ ಕಟ್ಟಿಕೊಂಡು ಬಂದು ಅವರೊಂದಿಗೆ ಜಗಳ ತೆಗೆದಿದ್ದರು ಎನ್ನುವುದು ನಿಜವಲ್ಲ. ಆರೋಪಿತರು ಕ್ರಿಕೇಟ್ ಆಡುವ ವಿಷಯಕ್ಕೆ ಸಂಬಂಧಪಟ್ಟಂತೆ ಅವರೊಂದಿಗೆ ಜಗಳ ತೆಗೆದು ಅವರಿಗೆ ಅವಾಚ್ಯ ಶಬ್ದಗಳಿಂದ ಬೈದು 1ನೇ ಆರೋಪಿಯು ಚಾಸಾ 10 ರವರಿಗೆ ಕ್ರಿಕೇಟ ಬ್ಯಾಟನಿಂದ ಮತ್ತು ವಿಕೇಟಿನಿಂದ ಹೊಡೆದು ಹಲ್ಲೆ ಮಾಡಿದ್ದರು ಎನ್ನುವುದು ನಿಜವಲ್ಲ. 3 ನೇ ಆರೋಪಿಯು ಅವರಿಗೆ ಕಲ್ಲಿನಿಂದ ಹೊಡೆದು ಹಲ್ಲೆ ಮಾಡಿದ್ದರು ಮತ್ತು ಚಾಸಾ 4 ರವರ ಕೈ ಮತ್ತು ಬಟ್ಟೆಗಳನ್ನು ಎಳೆದು ಆಕೆಗೆ ಅವಮಾನ ಮಾಡಿದ್ದ ಎನ್ನುವುದು ನಿಜವಲ್ಲ. ಆರೋಪಿತರು ಅವರಿಗೆ ಕೊಲೆ ಬೆದರಿಕೆಯನ್ನು ಕೂಡ ಹಾಕಿದ್ದರು ಎನ್ನುವುದು ನಿಜವಲ್ಲ. ಈ ಬಗ್ಗೆ ನಾನು ಶಹಪೂರ ಪೋ.ಠಾಣೆಗೆ ಹಾಜರಾಗಿ ನಿ.ಪಿ.11 ರಂತೆ ಒಂದು ಹೇಳಿಕೆಯನ್ನು ಕೊಟ್ಟಿದ್ದೆ ಎನ್ನುವುದು ನಿಜವಲ್ಲ. ಆರೋಪಿತರಿಗೆ ಸಹಾಯ ಮಾಡಲು ನಾನು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎನ್ನುವುದು ನಿಜವಲ್ಲ.

ಪಾಟೀ ಸವಾಲುಃ  ಆರೋಪಿತರ ಪರವಾಗಿಃ  ಶ್ರೀ ಪಿ.ಎಸ್.ವೈ. ವಕೀಲರಿಂದಃ

ಆರೋಪಿ ಪರ ವಕೀಲರು ಇಲ್ಲ ಎಂದು ಹೇಳುತ್ತಾರೆ.
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದ ಮೂಲಕ ಬೆರಳಚ್ಚು  ಮಾಡಿಸಲಾಯಿತು.)

ಓ ಹೇ ಕೇ ಸರಿ ಇದೆ,

(ಮಂಜುನಾಥ ನಾಯಕ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಬೆಳಗಾವಿ.